ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 21/8/2020

## ಸೆ.21ರಿಂದ ಅಧಿವೇಶನ

**ಬೆಂಗಳೂರು:** ಸೆಪ್ಟೆಂಬರ್ 21ರಿಂದ 30ರ ವರೆಗೆ ರಾಜ್ಯ ವಿಧಾನ ಮಂಡಲ ಅಧಿವೇಶನ ಕರೆಯುವ ನಿರ್ಧಾರವನ್ನು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಜತೆಗೆ, ಸರಕಾರ ಈಗಾಗಲೇ ಜಾರಿಗೆ ತಂದಿರುವ ಮಹತ್ವದ ಸುಗ್ರೀವಾಜ್ಞೆಗಳನ್ನು ವಿಧೇಯಕ ರೂಪದಲ್ಲಿ ಸದನದಲ್ಲಿ ಮಂಡಿಸುವ ನಿರ್ಣಯ ತೆಗೆದುಕೊಳ್ಳಲಾಗಿದೆ.



ಸೆ.23ರೊಳಗಾಗಿ ವಿಧಾನ ಮಂಡಲ ಅಧಿವೇಶನ ಕರೆಯಲೇಬೇಕಾಗಿರುವುದರಿಂದ 21ರಿಂದ 30ರ ವರೆಗೆ ಬೆಂಗಳೂರಿನಲ್ಲೇ ನಡೆಸಲು ನಿರ್ಧರಿಸಲಾಗಿದೆ. ಆದರೆ ಕೋವಿಡ್ ಹಿನ್ನೆಲೆಯಲ್ಲಿ ಕಲಾಪವನ್ನು ಎಲ್ಲಿ ಹಾಗೂ ಹೇಗೆ ನಡೆಸಬೇಕೆಂಬ ಬಗ್ಗೆ ವಿಧಾನಸಭಾಧ್ಯಕ್ಷರು ಹಾಗೂ ಪರಿಷತ್ ಸಭಾಪತಿ ಜತೆಗೆ ಚರ್ಚೆ ನಡೆಸಿ ಕ್ರಮ ತೆಗೆದುಕೊಳ್ಳುವ ಸಾಧ್ಯತೆಯಿದೆ.